ರಾಷ್ಟ್ರೀಯ ಆರೋಗ್ಯ ಅಭಿಯಾನ

# ಜಿಲ್ಲಾ ಆರೋಗ್ಯ ಮತ್ತು ಕು.ಕ. ಸಂಘ, ಬೆಂಗಳೂರು ನಗರ ಜಿಲ್ಲೆ.

ಹಳೇ ಟಿ.ಬಿ ಆಸ್ಪತ್ರೆ ಆವರಣ ಹಳೇ ಮದ್ರಾಸ್ ರಸ್ತೆ, ಇಂದಿರನಗರ, ಬೆಂಗಳೂರು–38.

ಸಂಖ್ಯೆ: ಡಿಹೆಚ್ಎಸ್/ಬೆಂ.ನ.ಜಿ/ನಮ್ಮ ಕ್ಲಿನಿಕ್/ಗುಸಿ/01/2026–27

ದಿನಾಂಕ:30.05.2026

## ನೇಮಕಾತಿ ಪ್ರಕಟಣೆ

ಬೆಂಗಳೂರು ನಗರ ಜಿಲ್ಲೆಯ ಎನ್‌ಹೆಚ್‌ಎಂ ಯೋಜನೆಯ PM-ABHIM ಕಾರ್ಯಕ್ರಮದಡಿ ನಮ್ಮ ಕ್ಲಿನಿಕ್‌ಗಳಿಗೆ ಹೊಸದಾಗಿ ಅನುಮೋದನೆಯಾಗಿರುವ ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯಮಾನುಸಾರ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ವಿವರ ಈ ಕೆಳಕಂಡಂತೆ ವಿವರಿಸಲಾಗಿದೆ.

| ಕ್ರ. ಸಂ. | ಹುದ್ದೆಗಳ ವಿವರ | ವಿದ್ಯಾರ್ಹತೆ | ಮಾಸಿಕ ಸಂಚಿತ ವೇತನ (ರೂ) | ಒಟ್ಟು ಹುದ್ದೆಗಳ ಸಂಖ್ಯೆ | ಗರಿಷ್ಠ ವಯೋಮಿತಿ |
|---|---|---|---|---|---|
| 1 | ವೈದ್ಯಾಧಿಕಾರಿಗಳು | ಎಂ.ಬಿ.ಬಿ.ಎಸ್ ಉತ್ತೀರ್ಣರಾಗಿ ಕಡ್ಡಾಯವಾಗಿ Internship ಪೂರೈಸಿ ಕೆ.ಎಂ.ಸಿ ನೋಂದಣಿ ಹೊಂದಿರಬೇಕು | 60,000/– | 9 | 60 ವರ್ಷ ಒಳಗಿರತಕ್ಕದ್ದು |
| 2 | ಶುಶ್ರೂಷಣಾಧಿಕಾರಿಗಳು | ಮಾನ್ಯತೆ ಪಡೆದ ನರ್ಸಿಂಗ್ ಶಾಲೆಯಲ್ಲಿ ಬಿಎಸ್‌ಸಿ / ಜಿಎನ್‌ಎಂ ತರಬೇತಿ ಹಾಗೂ ಕೆಎನ್‌ಸಿ ನೋಂದಣಿ ಹೊಂದಿ ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. | 20,594/– | 6 | • ಸಾಮಾನ್ಯ ವರ್ಗ– 35ವರ್ಷ<br>• 2ಎ, 2ಬಿ, 3ಎ, 3ಬಿ – 38 ವರ್ಷ<br>• ಪ.ಜಾ, ಪ.ಪಂ, ಪ್ರವರ್ಗ(1) – 40 ವರ್ಷ |
| 3 | ಪ್ರಯೋಗಶಾಲಾ ತಂತ್ರಜ್ಞರು | • ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಕೋರ್ಸ್‌ನಲ್ಲಿ ಉತ್ತೀರ್ಣ ಹೊಂದಿರಬೇಕು.<br>• ದ್ವಿತೀಯ ಪಿ.ಯು.ಸಿಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ರಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ 2 ವರ್ಷದ ಕೋರ್ಸ್‌ನಲ್ಲಿ ಉತ್ತೀರ್ಣ ಪಡೆದಿರಬೇಕು.<br>• ಪ್ರಯೋಗಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯಲ್ಲಿ ನೋಂದಣಿಯನ್ನು ಹೊಂದಿರಬೇಕು | 20,594/– | 2 | |
| 4 | ಕಿರಿಯ ಆರೋಗ್ಯ ಸಹಾಯಕರು | ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿವಿಧೋದ್ದೇಶ ಮೂಲ ಆರೋಗ್ಯ ಕಾರ್ಯಕರ್ತರ ತರಬೇತಿಯನ್ನು ಪಡೆದಿರಬೇಕು. ಅಥವಾ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ಅರೆ ವೈದ್ಯಕೀಯ ಮಂಡಳಿ ನಡೆಸುವ 3 ವರ್ಷಗಳ ಆರೋಗ್ಯ ನಿರೀಕ್ಷಕರ ಡಿಪ್ಲೊಮಾ ಹೊಂದಿರಬೇಕು. ಅಥವಾ ಪಿ.ಯು.ಸಿ (ವಿಜ್ಞಾನ) ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ಅರೆ ವೈದ್ಯಕೀಯ ಮಂಡಳಿ ನಡೆಸುವ 2 ವರ್ಷಗಳ ಆರೋಗ್ಯ ನಿರೀಕ್ಷಕರ ಡಿಪ್ಲೊಮಾ ಹೊಂದಿರಬೇಕು. | 20,404/– | 6 | |

• ಈ ಆಯ್ಕೆಯು / ನೇಮಕಾತಿಯು ಎನ್‌ಹೆಚ್‌ಎಂ ಮಾರ್ಗಸೂಚಿಗಳಂತೆ ರೋಸ್ಟರ್ ಕಮ್ ಮೆರಿಟ್ ಅನ್ವಯ ನೇಮಕಾತಿ ಮಾಡಿಕೊಳ್ಳಲಾಗುವುದು, ಈ ಗುತ್ತಿಗೆ ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಹ ಮೀಸಲಾತಿ ಅಭ್ಯರ್ಥಿಗಳು ದೊರೆಯದೇ ಇರುವ ಸಂದರ್ಭದಲ್ಲಿ ಮಾತ್ರ ಸಾಮಾನ್ಯ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು (ಸುತ್ತೋಲೆ ಸಂಖ್ಯೆ:ಆಕುಕ 25 ಎಂಎಸ್ಎನ್ 2016 ದಿ:14–03–2016). ಈ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಯಾದರೂ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

• ಆಸಕ್ತಿಯುಳ್ಳ ಅಭ್ಯರ್ಥಿಗಳು **ದಿನಾಂಕ: 09.06.2026 ರಂದು ಬೆಳ್ಳಿಗೆ 10:30 ಗಂಟೆಯಿಂದ ಮದ್ಯಾಹ್ನ 02:00 ಗಂಟೆವರೆಗೆ ನಡೆಯುವ ನೇರ ಸಂದರ್ಶನಕ್ಕೆ ತಮ್ಮ ಮೂಲ ದಾಖಲೆಗಳೊಂದಿಗೆ 1 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ಕಛೇರಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣ, ಹಳೇ ಟಿ.ಬಿ ಆಸ್ಪತ್ರೆ, ಹಳೇ ಮದ್ರಾಸ್ ರಸ್ತೆ, ಸ್ವಾಮಿ ವಿವೇಕಾನಂದ ಮೆಟ್ರೋ ನಿಲ್ದಾಣದ ಹತ್ತಿರ, ಇಂದಿರಾನಗರ, ಬೆಂಗಳೂರು–38** ಇಲ್ಲಿಗೆ ಹಾಜರಾಗುವುದು.

ಸಹಿ/–

ಸದಸ್ಯ ಕಾರ್ಯದರ್ಶಿಗಳು,

ಜಿಲ್ಲಾ ಆರೋಗ್ಯ ಮತ್ತು ಕು.ಕ ಸಂಘ, ಬೆಂಗಳೂರು ನಗರ ಜಿಲ್ಲೆ.

ವಾಸಾಸಂಇ/ವಾಪ್ರ/ಕೆಎ/941/2026–27